O.S.158/2022 PW-2

ದಿನಾಂಕಃ 21.01.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ನಾನು ಸಲ್ಲಿಸಿದ ಪ್ರಮಾಣ ಪತ್ರದಲ್ಲಿ ಇರುವ ವಿಚಾರ ನನಗೆ ತಿಳಿದಿಕೊಂಡಿರುತ್ತೇನೆ. ಸುಮಾರು 25 ವರ್ಷಗಳಿಂದ ನನಗೆ ವಾದಿಯ ಪರಿಚಯವಿರುತ್ತದೆ. ದಾವಾ ಸ್ವತ್ತಿನ ಸರ್ವೆ ನಂ. 73. ಸದರಿ ಜಮೀನಿನಲ್ಲಿ ಸಿದ್ದಗಂಗಮ್ಮನವರು ಸ್ವಾಧೀನದಲ್ಲಿ ಇಲ್ಲ ಎಂದರೆ ಸರಿಯಲ್ಲ. ಸದರಿ ಸ್ವತ್ತು ವಾದಿಯ ಪಿತ್ರಾರ್ಜಿತ ಸ್ವತ್ತಾಗಿರುತ್ತದೆ. 1953 ರಿಂದ ಸದರಿ ಸ್ವತ್ತು ಅರಣ್ಯ ಇಲಾಖೆಗೆ ಮಂಜೂರಾಗಿದ್ದು ಅಂದಿನಿಂದ ಅವರೇ ಸ್ವಾಧೀದಲ್ಲಿದ್ದಾರೆ ಎಂದರೆ ಸರಿಯಲ್ಲ. ಸದರಿ ಸ್ವತ್ತಿನಲ್ಲಿ ದೊಡ್ಡ ಮರಗಳನ್ನು ಬೆಳಿಸಿಕೊಂಡು ಅರಣ್ಯ ಇಲಾಖೆಯವರು ಸ್ವಾಧೀದಲ್ಲಿದ್ದಾರೆ ಎಂದರೆ ಸರಿಯಲ್ಲ. ವಾದಿಗೆ ಜಮೀನು ಬಂದ ವಿಚಾರವಾಗಿ ಯಾವುದೇ ದಾಖಲೆಗಳು ಇಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯವಿಚಾರಣೆಯಲ್ಲಿ ಹೇಳಿರುವ ಎಲ್ಲಾ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ. ಸರ್ಕಾರದ ಜಮೀನನ್ನು ಲಪಟಾಯಿಸುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ.ಹೇ.ಕೇ.ಸರಿ.ಇದೆ.

ಸಹಿ/-

ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,

ಶಿರಾ.